ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ    ದಿನಾಂಕ : DATE : 05/12/202

# ಸುಪ್ರೀಂ ಮೆಟ್ಟಿಲೇರಲು ಸರ್ಕಾರ ಸಜ್ಜು

## ಬಿಬಿಎಂಪಿ ಚುನಾವಣೆ ನಡೆಸುವಂತೆ ಹೈಕೋರ್ಟ್‌ನ ಆದೇಶ ಪ್ರಶ್ನಿಸಿ ಸುಪ್ರೀಂಕೋರ್ಟ್‌ಗೆ
## ಚಳಿಗಾಲದ ಅಧಿವೇಶನದಲ್ಲಿ ಬಿಬಿಎಂಪಿ ಕಾಯ್ದೆಗೆ ಅನುಮೋದನೆ ಪಡೆಯಲು ಚಿಂತನೆ
## ಈ ಮೂಲಕ ಚುನಾವಣೆ ಮುಂದೂಡಲು ಸಕಾರಣ ನೀಡಲು ರಾಜ್ಯ ಸರ್ಕಾರ ಸಿದ್ಧತೆ

• ಕನ್ನಡಪ್ರಭ ವಾರ್ತೆ ಬೆಂಗಳೂರು 5/12/20


ಬಿಬಿಎಂಪಿಗೆ ಚುನಾವಣೆ ನಡೆಸಲು ಮುಂದಿನ ಎರಡೂವರೆ ತಿಂಗಳಲ್ಲಿ ಕ್ರಮ ಕೈಗೊಳ್ಳುವಂತೆ ಸರ್ಕಾರ ಹಾಗೂ ಚುನಾವಣಾ ಆಯೋಗಕ್ಕೆ ನಿರ್ದೇಶಿಸಿರುವ ಹೈಕೋರ್ಟ್ ಆದೇಶ ಪ್ರಶ್ನಿಸಿ ಸುಪ್ರೀಂಕೋರ್ಟ್ ಮೊರೆ ಹೋಗಲು ರಾಜ್ಯ ಸರ್ಕಾರ ಸಿದ್ಧತೆ ನಡೆಸಿದೆ.



ಜೊತೆಗೆ ಚುನಾವಣೆ ಮುಂದೂಡಿಕೆಗೆ ಸೂಕ್ತ ಕಾರಣ ಗಳನ್ನು ನೀಡುವ ಸಲುವಾಗಿ ಡಿ.7ರಿಂದ ಆರಂಭವಾಗಲಿರುವ ಚಳಿಗಾಲದ ಅಧಿವೇಶನದಲ್ಲೇ 'ಬಿಬಿಎಂಪಿ ಕಾಯಿದೆ-2020' ವಿಧೇಯಕ ಮಂಡಿಸಿ, ಅನು ಮೋದನೆ ಪಡೆಯಲೂ ಗಂಭೀರ ಚಿಂತನೆ ನಡೆಸಿದೆ. 'ಬಿಬಿಎಂಪಿ ವಿಧೇಯಕ-2020'ಕ್ಕೆ ಅನುಮೋದನೆ ಪಡೆಯುವ ಮೂಲಕ ವಾರ್ಡ್‌ಗಳ ಸಂಖ್ಯೆಯನ್ನು 198ರಿಂದ 243ಕ್ಕೆ ಹೆಚ್ಚಳ ಮಾಡುವ, ಬಿಬಿಎಂಪಿಯನ್ನು ಪುನರ್‌ರಚಿಸುವ ಸಲುವಾಗಿ ಹೆಚ್ಚುವರಿ ಕಾಲಾವಕಾಶ ಕೋರಿ ಚುನಾವಣೆ ಮುಂದೂಡುವಂತೆ ಮನವಿ ಮಾಡಲು ಸರ್ಕಾರ ಉದ್ದೇಶಿಸಿದೆ. ಇದರ ಜೊತೆಗೆ ಕೊರೋನಾ ತಾಂತ್ರಿಕ ಸಲಹಾ ಸಮಿತಿಯ ವರದಿಯನ್ನೂ ಸುಪ್ರೀಂಕೋರ್ಟ್ ಎದುರು ಮಂಡಿಸಿ ಈ ಹಂತದಲ್ಲಿ ಚುನಾವಣೆ ನಡೆಸುವುದು ಸೂಕ್ತವಲ್ಲ ಎಂದು ಮನವರಿಕೆ ಮಾಡಲು ಸರ್ಕಾರ ಮುಂದಾಗಲಿದೆ ಎಂದು ತಿಳಿದು ಬಂದಿದೆ.

### ಮೇಲ್ಮನವಿ ಬಗ್ಗೆ ಚರ್ಚೆ: ಡಿಸಿಎಂ

ಈ ಬಗ್ಗೆ ಸುದ್ದಿಗಾರರೊಂದಿಗೆ ಮಾತನಾಡಿದ ಉಪಮುಖ್ಯಮಂತ್ರಿ ಡಾ.ಸಿ.ಎನ್. ಅಶ್ವತ್ಥನಾರಾಯಣ, ಬಿಬಿಎಂಪಿ ಚುನಾವಣೆಗೆ ಸಂಬಂಧಿಸಿದಂತೆ ಹೈಕೋರ್ಟ್ ಆದೇಶದ ವಿರುದ್ಧ ಸುಪ್ರೀಂಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಲು ಉದ್ದೇಶಿಸಿದ್ದೇವೆ.



ಪ್ರಣಾಳಿಕೆಯಲ್ಲಿ ಘೋಷಿಸಿರುವಂತೆ ಬಿಬಿಎಂಪಿ ಪ್ರತ್ಯೇಕ ಕಾಯಿದೆಯ ವಿಧೇಯಕವನ್ನು ಇದೇ ಅಧಿವೇಶನದಲ್ಲಿ ಜಾರಿಗೆ ತರಲು ಚಿಂತಿಸಿದ್ದೇವೆ. ಈ ಬಗ್ಗೆ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿ ಅಂತಿಮ ತೀರ್ಮಾನ ಮಾಡಲಾಗುವುದು ಎಂದರು.

### ಪ್ರಸಕ್ತ ಅಧಿವೇಶನದಲ್ಲಿ ಬಿಬಿಎಂಪಿ ಕಾಯಿದೆ?

ಬಿಬಿಎಂಪಿಗೆ ಹಾಲಿ ಇರುವ 198 ವಾರ್ಡ್‌ಗಳನ್ನೇ 243 ವಾರ್ಡ್‌ಗಳಿಗೆ ವಿಸ್ತರಣೆ ಮಾಡಬೇಕು. ಜತೆಗೆ 15 ವಲಯಗಳನ್ನಾಗಿ ವಿಭಜಿಸುವ ಬದಲು 10-12 ವಲಯಗಳಿಗೆ ಸೀಮಿತಗೊಳಿಸಿ ಪ್ರಧಾನ ಕಾರ್ಯದರ್ಶಿ ಹುದ್ದೆಯ ಐಎಎಸ್ ಅಧಿಕಾರಿಗಳನ್ನು ಆಯುಕ್ತರನ್ನಾಗಿ ನೇಮಿಸಬೇಕು ಎಂಬುದು ಸೇರಿದಂತೆ ಹಲವು ಶಿಫಾರಸುಗಳುಳ್ಳ ವರದಿಯನ್ನು ಶಾಸಕ ಎಸ್.ರಘು ನೇತೃತ್ವದ ಜಂಟಿ ಶಾಸಕಾಂಗ ಸಮಿತಿ ಸಿದ್ಧಪಡಿಸಿದೆ.

'ಬೃಹತ್ ಬೆಂಗಳೂರು ಮಹಾ ನಗರ ಪಾಲಿಕೆ - 2020' ವಿಧೇಯಕದ ಕುರಿತ ಪ್ರಾಥಮಿಕ ವರದಿಯನ್ನು ಈಗಾಗಲೇ ಸಲ್ಲಿಸಿದ್ದು ಅಂತಿಮ ವರದಿಯನ್ನು ಪ್ರಸಕ್ತ ಅಧಿವೇಶನದಲ್ಲೇ ಮಂಡಿಸಿ ವಿಧೇಯಕ ಮಂಡನೆ ಮಾಡಲು ಸರ್ಕಾರ ಚಿಂತನೆ ನಡೆಸಿದೆ. ಮತದಾರರ ಪಟ್ಟಿ ಪರಿಷ್ಕರಣೆಗೆ ಮೊದಲೇ ವಿಧೇಯಕ ಮಂಡನೆ ಮಾಡಿ ಹೈಕೋರ್ಟ್‌ನಲ್ಲಿ ಆದೇಶದ ಕುರಿತು ಪುನರ್‌ಪರಿಶೀಲನಾ ಅರ್ಜಿ ಸಲ್ಲಿಸಲಾಗುವುದು. ಇಲ್ಲದಿದ್ದರೆ ಸುಪ್ರೀಂಕೋರ್ಟ್‌ನಲ್ಲಿ ಹೈಕೋರ್ಟ್ ಆದೇಶದ ವಿರುದ್ಧ ಮೇಲ್ಮನವಿ ಸಲ್ಲಿಸಲಾಗುವುದು ಎಂದು ನಗರಾಭಿವೃದ್ಧಿ ಇಲಾಖೆ ಮೂಲಗಳು ತಿಳಿಸಿವೆ.